ಮೂ. ದಾ. ನಂ. 93/2023

ಪಿ.ಡಬ್ಲ್ಯು 1

(ಇಂದು ದಿನಾಂಕ 22-06-2024 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.)

**ಮುಂದುವರಿದ ಮುಖ್ಯ ವಿಚಾರಣೆ – ವಾದಿ ಪರ ಶ್ರೀ ಬಿ.ಎಸ್.ಯು. ವಕೀಲರಿಂದ–**

ನಾನು ದಾವೆಗೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನೋಡಿ ಗುರುತಿಸುತ್ತೇನೆ. ಪ್ರತಿವಾದಿಯು ವಾದಿಗೆ ನೀಡಿದ 2 ಎಸ್ಟಿಮೇಟ್ ರಶೀದಿಗಳನ್ನು ನಿಶಾನೆಯನ್ನಾಗಿ ಗುರುತಿಸಲು ಪ್ರತಿವಾದಿ ಪರ ವಕೀಲರು ತಕರಾರು ಸಲ್ಲಿಸಿದ್ದು, ತಕರಾರಿಗೆ ಒಳಪಟ್ಟು ಕ್ರಮವಾಗಿ ನಿ.ಪಿ. 1 ಮತ್ತು 2 ಎಂದು, ವಾದಿಯು ವಕೀಲರ ಮೂಲಕ ಪ್ರತಿವಾದಿಗೆ ನೀಡಿದ ನೊಟೀಸಿನ ಪ್ರತಿಯನ್ನು ನಿ.ಪಿ. 3 ಎಂದು, ಅಂಚೆ ರಶೀದಿಯನ್ನು ನಿ.ಪಿ. 4 ಎಂದು, ಅಂಚೆ ಸ್ವೀಕೃತಿಯನ್ನು ನಿ.ಪಿ. 5 ಎಂದು, ಅದರಲ್ಲಿರುವ ಪ್ರತಿವಾದಿಯ ಸಹಿಯನ್ನು ನಿ.ಪಿ. 5(ಎ) ಎಂದು, ಪ್ರತಿವಾದಿಯು ನೊಟೀಸಿಗೆ ನೀಡಿದ ಉತ್ತರವನ್ನು ನಿ.ಪಿ. 6 ಎಂದು, ವಾದಿಯವರ ಖಾತೆಯ ಉತಾರಿನ ದೃಢೀಕೃತ ಪ್ರತಿಯನ್ನು ನಿ.ಪಿ. 7 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದರಿಂದ ನೀಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ. ಸರಿ ಇದೆ.

ಪ್ರಧಾನ ಸಿವಿಲ್ ಜಡ್ಜ, ಕುಮಟಾ